ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿಮೂರನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 16ನೇ ಮಾರ್ಚ್, 2017
(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಐದನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಐದನೇ ಪಟ್ಟಿ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:–

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಚುನಾವಣಾ ಪ್ರಸ್ತಾವ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು) ಅವರು :–

ಕರ್ನಾಟಕ ರಾಜ್ಯ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

–2–

4. ವಿತ್ತೀಯ ಕಾರ್ಯಕಲಾಪಗಳು

"2017–18ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ" .

5. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಡಿ. ನಾಗರಾಜಯ್ಯ** ಇವರು – ಕುಣಿಗಲ್ ತಾಲ್ಲೂಕಿನಲ್ಲಿ ನಿರ್ಮಾಣ ಹಂತದಲ್ಲಿರುವ ಮಿನಿ ವಿಧಾನಸೌಧ ಕಟ್ಟಡವನ್ನು ಪೂರ್ಣಗೊಳಿಸದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. **ಶ್ರೀ ವೈ.ಎ. ನಾರಾಯಣಸ್ವಾಮಿ** ಇವರು – ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ರೆಫರೆಲ್ ಆಸ್ಪತ್ರೆಗಳು ಸೇರಿದಂತೆ ಭಾರತೀಯ ವೈದ್ಯ ಪದ್ಧತಿಯ ಆಯುಷ್ ಅಡಿಯಲ್ಲಿ ಬರುವ ಸರ್ಕಾರಿ ಆಯುರ್ವೇದ ಆಸ್ಪತ್ರೆಗಳಲ್ಲಿ ವೈದ್ಯರುಗಳನ್ನು ನೇಮಕಾತಿ ಮಾಡಿಕೊಳ್ಳುವಾಗ ಅನುಸರಿಸುತ್ತಿರುವ ಮಾನದಂಡಗಳ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. **ಶ್ರೀ ಲಕ್ಷ್ಮಣ ಸಂಗಪ್ಪ ಸವದಿ** ಇವರು ರಾಜ್ಯದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

4. **ಶ್ರೀ ಎಸ್.ಎನ್. ನಾರಾಯಣಸ್ವಾಮಿ** ಇವರು – ಬಂಗಾರಪೇಟೆ ಕ್ಷೇತ್ರದ ತೋಟಗಾರಿಕೆ ಇಲಾಖೆಯ ಕಟ್ಟಡ ಶಿಥಿಲಾವಸ್ಥೆಯಲ್ಲಿರುವುದರಿಂದ ಹೊಸ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

5. **ಶ್ರೀ ಯು.ಬಿ. ಬಣಕಾರ್** ಇವರು – ಹಾವೇರಿ ಜಿಲ್ಲೆಯ ಹಿರೇಕೆರೂರ ಮತ್ತು ರಾಣೆಬೆನ್ನೂರು ತಾಲ್ಲೂಕು ಕೇಂದ್ರದಲ್ಲಿ ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಹಾಗೂ ಅಕ್ರಮ – ಸಕ್ರಮ ಸಾಗುವಳಿದಾರರಿಗೆ ಪಟ್ಟಾ ನೀಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದವರು ಧರಣಿ ನಡೆಸುತ್ತಿರುವ ವಿಷಯದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm